ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	956 (1127)
ಮಾನ್ಯ ಸದಸ್ಯರ ಹೆಸರು	:	ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	21-09-2021
ಉತ್ತರಿಸುವ ಸಚಿವರು	:	ಪೌರಾಡಳಿತ, ಸಣ್ಣ ಕೈಗಾರಿಕೆ, ಸಾರ್ವಜನಿಕ ವಲಯ ಉದ್ಯಮಗಳ ಸಚಿವರು

ಕ್ರ. ಸಂ	ಪ್ರಶ್ನೆ	ಉತ್ತರ
ಅ)	2015 ರಿಂದ 2021 ರವರೆಗೆ ಸ್ವಚ್ಛ ಭಾರತ್ ಯೋಜನೆಯಡಿ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು;	ಕೇಂದ್ರ ಸರ್ಕಾರವು ಜಾರಿಗೊಳಿಸಿರುವ ಸ್ವಚ್ಛ ಭಾರತ ಮಿಷನ್ (ನಗರ) ಯೋಜನೆಯಡಿ 2015 ರಿಂದ 2021 ರವರೆಗೆ ವಿವಿಧ ಘಟಕಗಳಿಗಾಗಿ ಒಟ್ಟು ರೂ. 721.36 ಕೋಟಿಗಳ ಅನುದಾನ ಬಿಡುಗಡೆಯಾಗಿರುತ್ತದೆ.
ಆ)	ಈ ಅನುದಾನದಲ್ಲಿ ಯಾವ ಯಾವ ರೀತಿಯ ಯೋಜನೆಗಳ ಮೂಲಕ ಅನುದಾನವನ್ನು ವ್ಯಯ ಮಾಡಲಾಗುತ್ತಿದೆ; (ಸಂಪೂರ್ಣವಾಗಿ ಯೋಜನೆವಾರು ಮಾಹಿತಿಯನ್ನು ನೀಡುವುದು)	ಸ್ವಚ್ಛ ಭಾರತ ಮಿಷನ್ ಅಡಿ ಕೈಗೊಂಡಿರುವ ವಿವಿಧ ಘಟಕಗಳ ವಿವರಗಳನ್ನು **ಅನುಬಂಧ**-1 ರಲ್ಲಿ ಲಗತ್ತಿಸಿದೆ.
ಇ)	ಸ್ವಚ್ಛ ಭಾರತ್ ಯೋಜನೆಯಡಿ ಐ.ಇ.ಸಿ. ಕಾರ್ಯಕ್ರಮಗಳನ್ನು ಕೈಗೊಳ್ಳಲು ಮೀಸಲಿಸಿರುವ ಅನುದಾನವೆಷ್ಟು; (ವಿವರ ನೀಡುವುದು)	ಐ.ಇ.ಸಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಪಾಲು ಸೇರಿ ಒಟ್ಟು ರೂ. 138.25 ಕೋಟಿಗಳನ್ನು ಮೀಸಲಿರಿಸಲಾಗಿದೆ.
ಈ	ಮೀಸಲಿಸಿರುವ ಅನುದಾನವನ್ನು ವ್ಯಯ ಮಾಡಲು ವಿಫಲರಾದಂತಹ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ?	ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕೋವಿಡ್ ಪರಿಸ್ಥಿತಿಯಿಂದಾಗಿ ಸಾಮೂಹಿಕ ಸಭೆಗಳು, ಒಟ್ಟುಗೂಡುವಿಕೆಯಲ್ಲಿ ನಿರ್ಬಂಧವಿದ್ದುದರಿಂದ ಪೂರ್ಣ ಪ್ರಮಾಣದಲ್ಲಿ ಐ.ಇ.ಸಿ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಸಾಧ್ಯವಾಗಿರುವುದಿಲ್ಲ. ಹಾಲಿ ಎಲ್ಲಾ ನ.ಸ್ಥ.ಸಂ.ಗಳಲ್ಲಿ ಐ.ಇ.ಸಿ ಚಟುವಟಿಕೆಗಳನ್ನು ಪೂರ್ಣ ಪ್ರಮಾಣದಲ್ಲಿ ಹಮ್ಮಿಕೊಳ್ಳಲು ಕ್ರಮವಹಿಸಲಾಗುತ್ತಿದೆ ಹಾಗೂ ಅನುದಾನವನ್ನು ವಿನಿಯೋಗಿಸಲು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ.

ಸಂಖ್ಯೆ: ನಅಇ 164 ಸಿಎಸ್‌ಎಸ್ 2021

[ಎನ್. ನಾಗರಾಜ್ (ಎಂ.ಟಿ.ಬಿ.)]
ಪೌರಾಡಳಿತ, ಸಣ್ಣ ಕೈಗಾರಿಕೆ, ಸಾರ್ವಜನಿಕ ವಲಯ
ಉದ್ಯಮಗಳ ಸಚಿವರು.

ಅನುಬಂಧ-1

ಕ್ರ. ಸಂ.	ಎಸ್.ಬಿ.ಎಂ. (ನಗರ) ಘಟಕಗಳು	ಅನುದಾನ ಬಳಕೆ
1.	ವೈಯಕ್ತಿಕ ಶೌಚಾಲಯಗಳ ನಿರ್ಮಾಣ	ಶೌಚಾಲಯರಹಿತ ಮನೆಗಳಿಗೆ ವೈಯಕ್ತಿಕ ಶೌಚಾಲಯ ನಿರ್ಮಾಣ ಹಾಗೂ ಅನೈರ್ಮಲ್ಯ ಶೌಚಾಲಯಗಳನ್ನು ನೈರ್ಮಲ್ಯ ಶೌಚಾಲಯಗಳಾಗಿ ಉನ್ನತೀಕರಿಸುವುದು.
2.	ಸಮುದಾಯ ಶೌಚಾಲಯಗಳ ನಿರ್ಮಾಣ	ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸಲು ಜಾಗವಿಲ್ಲದ ಮನೆಗಳಿಗೆ ಸಮುದಾಯ ಶೌಚಾಲಯಗಳ ನಿರ್ಮಾಣ.
3.	ಸಾರ್ವಜನಿಕ ಶೌಚಾಲಯಗಳು ನಿರ್ಮಾಣ	ಪಟ್ಟಣಕ್ಕೆ ದಿನನಿತ್ಯ ಬಂದು ಹೋಗುವ ಜನರಿಗಾಗಿ ಸಾರ್ವಜನಿಕ ಶೌಚಾಲಯಗಳ ನಿರ್ಮಾಣ.
4.	ಘನತ್ಯಾಜ್ಯ ನಿರ್ವಹಣೆ	ನಗರ ಸ್ಥಳೀಯ ಸಂಸ್ಥೆಗಳ ವಿಧ ಹಾಗೂ ಅವಶ್ಯಕತೆಗನುಗುಣವಾಗಿ ಮೂಲದಲ್ಲಿಯೇ ತ್ಯಾಜ್ಯ ವಿಂಗಡಣೆ, ಮನೆ-ಮನೆಗಳಿಂದ, ವಾಣಿಜ್ಯ ಪ್ರದೇಶಗಳಿಂದ ಹಾಗೂ ಬೃಹತ್ ತ್ಯಾಜ್ಯ ಉತ್ಪಾದಕರಿಂದ ತ್ಯಾಜ್ಯ ಸಂಗ್ರಹಣೆ, ಒಣ ತ್ಯಾಜ್ಯ ಸಂಗ್ರಹಣಾ ಕೇಂದ್ರಗಳ ಸ್ಥಾಪನೆ, ಟ್ರಾನ್ಸ್‌ಫರ್ ಸ್ಟೇಷನ್‌ಗಳ ನಿರ್ಮಾಣ, ದ್ವಿತೀಯ ಹಂತದ ಸಾಗಣೆ, ವೈಜ್ಞಾನಿಕ ತ್ಯಾಜ್ಯ ಸಂಸ್ಕರಣೆ ಹಾಗು ವಿಲೇವಾರಿ ಇತ್ಯಾದಿಗಳ ಕಾರ್ಯಗಳನ್ನು ಕೈಗೊಳ್ಳಲು ಅಗತ್ಯವಿರುವ ಮೂಲಸೌಕರ್ಯಗಳನ್ನು ಒದಗಿಸಲು.
5.	ಸಾರ್ವಜನಿಕರಲ್ಲಿ ತಿಳುವಳಿಕೆ ಹಾಗು ಅರಿವು ಮೂಡಿಸುವುದು	ನಗರ ಸ್ಥಳೀಯ ಸಂಸ್ಥೆಗಳ ಹಂತದಲ್ಲಿ ಸ್ವಚ್ಛ ಭಾರತ್ ಮಿಷನ್ (ನಗರ) ಯೋಜನೆಯ ಧ್ಯೇಯೋದ್ದೇಶಗಳ ಬಗ್ಗೆ ವಿವಿಧ ಕಾರ್ಯಕ್ರಮಗಳ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು.
6.	ಬಲವರ್ಧನೆ ಹಾಗು ಆಡಳಿತ & ಕಛೇರಿ ವೆಚ್ಚಗಳು	▪ ಸ್ವಚ್ಛ ಭಾರತ್ ಮಿಷನ್ (ನಗರ) ಯೋಜನೆಯ ಬಗ್ಗೆ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿ ಮತ್ತು ಜನಪ್ರತಿನಿಧಿಗಳಿಗೆ ಕಾರ್ಯಾಗಾರಗಳು, ತರಬೇತಿ ಆಯೋಜನೆ. ▪ ಸಮಗ್ರ ಘನತ್ಯಾಜ್ಯ ವಸ್ತು ನಿರ್ವಹಣೆ ಡಿ.ಪಿ.ಆರ್.ಗಳನ್ನು ತಯಾರಿಸಲು. ▪ ಸ್ವಚ್ಛ ಭಾರತ್ ಸ್ಟೇಟ್ ಮಿಷನ್ ಡೈರೆಕ್ಟೊರೇಟ್ ನಲ್ಲಿ ಹೊರಗುತ್ತಿಗೆ ಮೂಲಕ ಕಾರ್ಯನಿರ್ವಹಿಸುತ್ತಿರುವ ವಿಷಯ ಪರಿಣತರು ಹಾಗೂ ಸಿಬ್ಬಂದಿಗಳ ವೇತನ ಪಾವತಿ. ▪ ಸ್ವಚ್ಛ ಭಾರತ್ ಮಿಷನ್ (ನಗರ) ಯೋಜನೆ ಅನುಷ್ಠಾನ ಕುರಿತು ಪ್ರಗತಿ ಪರಿಶೀಲನಾ ಸಭೆ ಆಯೋಜನೆ.